**ಅಸಲು ದಾವೆ ಸಂಖ್ಯೆ.209/2019**

ಪಿ.ಡಬ್ಲ್ಯು:1

**ದಿನಾಂಕ:11.08.2022 ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ ಪ್ರತಿವಾದಿ ಪರ ಶ್ರೀ ಕೆ.ಆರ್.ಎಸ್ ವಕೀಲರಿಂದಃ-**

ನಾನು ಪಿ.ಯು.ಸಿ ವರೆಗೂ ವಿದ್ಯಾಭ್ಯಾಸ ಮಾಡಿರುತ್ತೇನೆ. ನಾನು ಕೃಷಿ ಇಲಾಖೆಯಲ್ಲಿ ಸಹಾಯಕ ಕೃಷಿ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ. ನಾನು 9 ವರ್ಷಗಳ ಹಿಂದೆ ನಿವೃತ್ತಿಯಾಗಿರುತ್ತೇನೆ. ದಾವಾ ಅನುಸೂಚಿ ಸ್ವತ್ತುಗಳು ನಮ್ಮ ಪಿತ್ರಾರ್ಜಿತ ಆಸ್ತಿಗಳಾಗಿರುತ್ತವೆ. ನಮ್ಮ ಪಿತ್ರಾರ್ಜಿತ ಆಸ್ತಿಗಳು ವಿಭಾಗ ಆಗಿ ಕಂದಾಯ ದಾಖಲೆಗಳು ಬೇರೆ ಬೇರೆಯಾಗಿ ಬರುತ್ತವೆ ಎಂದರೆ ಸರಿ. ದಾವಾ ಸ್ವತ್ತಿನ ಚಕ್ಕುಬಂದಿಯ ಪಕ್ಕದಲ್ಲಿ ಪ್ರತಿವಾದಿಯರು ಸ್ವಾಧೀನ ಇದ್ದಾರೆ ಎಂದರೆ ಸಾಕ್ಷಿಯು ಪ್ರತಿವಾದಿಗಳು ಅರ್ದ ಜಮೀನನ್ನು ಮಾರಾಟ ಮಾಡಿದ್ದು ಖರೀದಿದಾರರು ಸ್ವಾಧೀನ ಇದ್ದಾರೆ ಎಂದು ನುಡಿಯುತ್ತಾರೆ. ವಿಭಾಗದಲ್ಲಿ ಪ್ರತಿವಾದಿಗಳ ಭಾಗಕ್ಕೆ ಬಂದಿರುವ ಆಸ್ತಿಗಳ ಮೇಲೆ ನನಗೆ ಹಕ್ಕು ಅಧಿಕಾರ ಇರುವುದಿಲ್ಲ. ನಾನು ವಿಭಾಗದಲ್ಲಿ ಬಂದಿರುವ ಆಸ್ತಿಯಲ್ಲಿ ಮತ್ತು 2020 ನೇ ಸಾಲಿನಲ್ಲಿ ಖರೀದಿ ಮಾಡಿರುವ ಆಸ್ತಿಯಲ್ಲಿ ಸ್ವಾಧೀನ ಹೊಂದಿದ್ದೇನೆ. ವಿಭಾಗದಲ್ಲಿ ಬಂದಿರುವ ಆಸ್ತಿಗಳನ್ನು ನಾನು ಅಳತೆ ಮಾಡಿಸಿರುವುದಿಲ್ಲ. ನಾನು ದಾವಾ ಆಸ್ತಿಯಲ್ಲಿ ಸ್ವಾಧೀನ ಇಲ್ಲದಿದ್ದರೂ ಸಹ ಸುಳ್ಳು ದಾವೆ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಪ್ರತಿವಾದಿಗಳು ಅವಿದ್ಯಾವಂತರಾಗಿರುವುದರಿಂದ ಅವರ ಆಸ್ತಿಯನ್ನು ಲಪಟಾಯಿಸುವ ಸಲುವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಮುಂದುವರೆದ ಮುಖ್ಯ ವಿಚಾರಣೆಗೆ ಮುಂದೂಡಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)**

ಓ ಹೇ ಕೇ ಸ ಇ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ:ದ:ನ್ಯಾ:ದಂ.,ರವರು, ಕಡೂರು.